ಇ) ನೀಡಿಲ್ಲದಿದ್ದರೆ ಕಾರಣಗಳೇನು.

ಈ) ಬೀದರ್ ಜಿಲ್ಲೆಯ ಚಿಟಗುಪ್ಪ ತಾಲ್ಲೂಕನ್ನು ಹೊಸದಾಗಿ ನಿರ್ಮಿಸುವ ಸಲುವಾಗಿ ಹುಂಡೇಕಾರ್ ಸಮಿತಿ ತನ್ನ ವರದಿ ನೀಡಿ ಎಷ್ಟು ದಿನಗಳಾಯಿತು.

ಉ) ಇದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಮಲ್ಲಿಕಾರ್ಜುನ ಎಂ. ಖರ್ಗೆ (ಕಂದಾಯ ಸಚಿವರು)

ಅ) ಶ್ರೀ ವಾಸುದೇವರಾವ್ ಆಯೋಗ
ಶ್ರೀ ಹುಂಡೇಕರ್ ಸಮಿತಿ
ಶ್ರೀ ಪಿ.ಸಿ. ಗದ್ದಿಗೌಡರ್ ಸಮಿತಿ.

ಆ) ಇನ್ನೂ ಸಲ್ಲಿಸಬೇಕಾಗಿದೆ.

ಇ) ಅಧಿಕಾರ ವರ್ಗದ ಸಮಿತಿಯ ವರದಿಯನ್ನು ಪರೀಕ್ಷಿಸಲಾಗುತ್ತಿದೆ.

ಈ) 4 ವರ್ಷಗಳು 6 ತಿಂಗಳು.

ಉ) ಆರ್ಥಿಕ, ಭೌಗೋಳಿಕ ಮತ್ತು ಆಡಳಿತಾತ್ಮಕ ಅಂಶಗಳನ್ನು ಅಧಿಕಾರಿ ವರ್ಗದ ಸಮಿತಿಯಿಂದ ಪರಿಶೀಲಿಸಲಾಗುತ್ತಿದೆ.

ದೇವಸ್ಥಾನಗಳ ತಸ್ದೀಕೆ ಹಣ ಜಾಸ್ತಿ ಮಾಡುವ ಬಗ್ಗೆ.

1256 - ಶ್ರೀ ಎ. ರುಕ್ಮಯ್ಯ ಪೂಜಾರಿ (ವಿಟ್ಲ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೇವಸ್ಥಾನಗಳ ದೈನಂದಿನ ಕೆಲಸಕಾರ್ಯಗಳಿಗೆ ಈಗ ಕೊಡುತ್ತಿರುವ ತಸ್ದೀಕೆ ಹಣ ಸಾಲದು ಎಂದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಅದನ್ನು ಹೆಚ್ಚಿಸುವ ಆಲೋಚನೆ ಸರ್ಕಾರಕ್ಕೆ ಇದೆಯೇ?

ಇ) ಹಾಗಿದ್ದಲ್ಲಿ ಯಾವಾಗ ಕ್ರಮ ತೆಗೆದುಕೊಳ್ಳಲಾಗುವುದು.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು):

ಅ) ಹೌದು.

ಆ) ಸದ್ಯಕ್ಕೆ ಇಲ್ಲ

ಇ) ರಾಜ್ಯದ ಧಾರ್ಮಿಕ ದತ್ತಿ ಸಂಸ್ಥೆಗಳ ನಿರ್ವಹಣೆಗೆ ಏಕರೂಪ ಶಾಸನ ಜಾರಿಗೆ ಬಂದ ನಂತರ ಪರಿಶೀಲಿಸಲಾಗುವುದು.

ತೋಟಗಾರಿಕೆ ಉತ್ಪನ್ನಗಳನ್ನು ವಿದೇಶಗಳಿಗೆ ರಫ್ತು ಮಾಡುವುದು.

1312 - ಶ್ರೀ ಪಿ.ಜಿ.ಆರ್. ಸಿಂಧ್ಯ(ಕನಕಪುರ) : ಮಾನ್ಯ ಕೃಷಿ ಮತ್ತು ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ತೋಟಗಾರಿಕೆ ಉತ್ಪನ್ನಗಳನ್ನು ವಿದೇಶಕ್ಕೆ ರಫ್ತು ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ?

ಆ) ಇದ್ದಲ್ಲಿ ಇದನ್ನು ಯಾವಾಗ, ಮತ್ತು ಯಾವ ರೀತಿಯಲ್ಲಿ ಕಾರ್ಯಗತ ಗೊಳಿಸಲಾಗುವುದು.?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಕೃಷಿ ಮತ್ತು ತೋಟಗಾರಿಕೆ ಸಚಿವರು):

ಅ) ತೋಟದ ಬೆಳೆಗಾರರ ಮಾರಾಟ ಮತ್ತು ಸಂಸ್ಕರಣ ಸಂಘ, ಬೆಂಗಳೂರು ಇವರು ನವದೆಹಲಿಯಲ್ಲಿರುವ ಕೃಷಿ ಹಾಗೂ ಸಂಸ್ಕರಿಸಿದ ಆಹಾರ ಪದಾರ್ಥಗಳ ರಫ್ತು ಅಭಿವೃದ್ಧಿ (ಫೆಡಾ) ಮುಖಾಂತರ ತೋಟದ ಉತ್ಪನ್ನಗಳನ್ನು ರಫ್ತು ಮಾಡಲು ಪ್ರಯತ್ನಿಸಿದ್ದು ಈ ದಿಸೆಯಲ್ಲಿ ರಫ್ತು ಪರವಾನಗಿಯನ್ನು ಪಡೆದಿದೆ.